# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1400
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 30.12.2022

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಹಲವಾರು ಪಟ್ಟಣಗಳಲ್ಲಿ ಸುಸಜ್ಜಿತ ಬಸ್ ನಿಲ್ದಾಣಗಳು ಹಾಗೂ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಪ್ರಯಾಣಿಕರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ಬಸ್ ನಿಲ್ದಾಣ ಹಾಗೂ ಉಡುಪಿ ಜಿಲ್ಲೆಯಲ್ಲಿ ಉಡುಪಿ ನಗರ ಮತ್ತು ಉಡುಪಿ ಗ್ರಾಮಾಂತರ ಬಸ್ ನಿಲ್ದಾಣಗಳಿದ್ದು, ಒಟ್ಟು 03 ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅವಶ್ಯವಿರುವ ಮೂಲಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. |
| ಆ. | ಬಂದಿದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಎಷ್ಟು ಸುಸಜ್ಜಿತ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲಾಗಿದೆ; ಹಾಗೂ ಸದರಿ ಕಾಮಗಾರಿಗಳಿಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಿರ್ಮಿಸಲಾಗಿರುವ ಬಸ್ ನಿಲ್ದಾಣಗಳು ಹಾಗೂ ವಿನಿಯೋಗಿಸಿರುವ ಅನುದಾನದ ವಿವರ ಈ ಕೆಳಕಂಡಂತಿದೆ:<br>1. ಉಡುಪಿಯಲ್ಲಿ ಗ್ರಾಮಾಂತರ ಬಸ್ ನಿಲ್ದಾಣ – ರೂ.3134.00 ಲಕ್ಷಗಳು<br>2. ಉಡುಪಿಯಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ - ರೂ. 387.99 ಲಕ್ಷಗಳು |
| ಇ. | ಸದರಿ ಜಿಲ್ಲೆಗಳಲ್ಲಿ ಹಾಲಿ ಇರುವ ಎಷ್ಟು ಬಸ್ ನಿಲ್ದಾಣಗಳನ್ನು ಕಳೆದ ಮೂರು ವರ್ಷಗಳಲ್ಲಿ ಮೇಲ್ದರ್ಜೆಗೇರಿಸಲಾಗಿದೆ; ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು? | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವುದೇ ಬಸ್ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸುವ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ. |

ಸಂಖ್ಯೆ: ಟಿಡಿ 349 ಟಿಸಿಕ್ಯೂ 2022

(ಬಿ.ಶ್ರೀರಾಮುಲು)



Generated from eOffice by B SREERAMULU, TD-MIN(BS), TRANSPORT MINISTER, Trans on 27/12/2022 06:36 PM